# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:– ಬುಲ್‌ಟ್ರಾಲಿಂಗ್ ಮೀನುಗಾರಿಕೆಯನ್ನು ನಿಷೇಧಿಸುವ ಬಗ್ಗೆ.

ಓದಲಾಗಿದೆ:– (1) ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 21001/13/2006–Fy(Ind) Vol.II, ದಿನಾಂಕ: 21–02–2013.

(2) ಮೀನುಗಾರಿಕೆ ನಿರ್ದೇಶಕರ ಪತ್ರ ಸಂಖ್ಯೆ: ಎಂಇಎಫ್/26/ 2014–15, ದಿನಾಂಕ: 08–11–2016.

******

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಕೇಂದ್ರ ಸರ್ಕಾರದ ಪತ್ರದಲ್ಲಿ, ರಾಜ್ಯ ಸರ್ಕಾರಗಳು "territorial water" ನಲ್ಲಿ ಬುಲ್‌ಟ್ರಾಲಿಂಗ್ ಮೂಲಕ ಮೀನುಗಾರಿಕೆ ಮಾಡುವುದನ್ನು ನಿಷೇಧಿಸಲು ಕ್ರಮವಹಿಸುವಂತೆ ತಿಳಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಮೀನುಗಾರಿಕೆ ನಿರ್ದೇಶಕರ ಪತ್ರದಲ್ಲಿ, 12 ನಾಟಿಕಲ್ ಮೈಲ್‌ವರೆವಿನ ಪ್ರದೇಶದಲ್ಲಿ ಬುಲ್‌ಟ್ರಾಲಿಂಗ್ ಮೀನುಗಾರಿಕೆಯನ್ನು ನಿಷೇಧಿಸುವುದು ಸೂಕ್ತವೆಂದು CIFT ಇವರು ಅಭಿಪ್ರಾಯಪಟ್ಟಿದ್ದು, ಕೇಂದ್ರ ಸರ್ಕಾರದ ದಿನಾಂಕ: 12–11–2014 ರ "New guidelines for conduct of fishing operation in Indian Exclusive Economic Zone" ನಲ್ಲಿ ಕೇಂದ್ರ ಸರ್ಕಾರದ ವ್ಯಾಪ್ತಿಯಲ್ಲಿ ಬರುವ Exclusive Economic Zone ನಲ್ಲಿ ಬುಲ್‌ಟ್ರಾಲಿಂಗ್ ಮೀನುಗಾರಿಕೆಗೆ ಅನುಮತಿ ನೀಡಿರುವುದಿಲ್ಲ. ಆದ್ದರಿಂದ, ಕರ್ನಾಟಕ ಕಡಲ ಮೀನುಗಾರಿಕೆ ಕಾಯ್ದೆಯ ಸೆಕ್ಷನ್ (3)ರ ಸಬ್ ಸೆಕ್ಷನ್ (1)(ಡಿ)ಯಲ್ಲಿ ನೀಡಿರುವ ಅಧಿಕಾರದನ್ವಯ ಕರ್ನಾಟಕ ರಾಜ್ಯದ 12 ನಾಟಿಕಲ್ ಮೈಲ್ (territorial water) ವರೆಗಿನ ಪ್ರದೇಶದಲ್ಲಿ ಬುಲ್‌ಟ್ರಾಲಿಂಗ್ ಮೀನುಗಾರಿಕೆಯನ್ನು ನಿಷೇಧಿಸಿ ಅಧಿಸೂಚನೆ ಹೊರಡಿಸುವಂತೆ ಕೋರಿರುತ್ತಾರೆ.

–2–

MEF



ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಪಸಂಮೀ 158 ಮೀಇಯೋ 2016, ಬೆಂಗಳೂರು ದಿನಾಂಕ: 15-11-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕೇಂದ್ರ ಸರ್ಕಾರದ ದಿನಾಂಕ: 12-11-2014 ರ "New guidelines for conduct of fishing operation in Indian Exclusive Economic Zone" ನಲ್ಲಿ ಕೇಂದ್ರ ಸರ್ಕಾರದ ವ್ಯಾಪ್ತಿಯಲ್ಲಿ ಬರುವ Exclusive Economic Zone ನಲ್ಲಿ ಬುಲ್‌ಟ್ರಾಲಿಂಗ್ ಮೀನುಗಾರಿಕೆಗೆ ಅನುಮತಿ ನೀಡಿರುವುದಿಲ್ಲ. ಸದರಿ ಮಾರ್ಗಸೂಚಿಗಳ ಹಿನ್ನೆಲೆಯಲ್ಲಿ, ಕರ್ನಾಟಕ ಕಡಲ ಮೀನುಗಾರಿಕೆ ಕಾಯ್ದೆಯ ಸೆಕ್ಷನ್ (3) ಸಬ್ ಸೆಕ್ಷನ್ 1(ಡಿ)ರಲ್ಲಿ ನೀಡಿರುವ ಅಧಿಕಾರದನ್ವಯ ಕರ್ನಾಟಕ ರಾಜ್ಯದ 12 ನಾಟಿಕಲ್ ಮೈಲ್ (territorial water)ವರೆಗಿನ ಪ್ರದೇಶದಲ್ಲಿ ಬುಲ್ ಟ್ರಾಲಿಂಗ್ ಮೀನುಗಾರಿಕೆಯನ್ನು ನಿಷೇಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

15/11/16

(ರಶ್ಮಿ ಶಿವಶಂಕರ ಪೋಳ)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

15/11/16

**ಇವರಿಗೆ:**

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)(ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
4) ಮೀನುಗಾರಿಕೆ ಉಪ ನಿರ್ದೇಶಕರು, ಮಂಗಳೂರು / ಕಾರವಾರ.
5) ಸಂಬಂಧಪಟ್ಟ ಎಲ್ಲಾ ಮೀನುಗಾರಿಕೆ ಅಧಿಕಾರಿಗಳಿಗೆ – ಮೀನುಗಾರಿಕೆ ನಿರ್ದೇಶಕರ ಮುಖಾಂತರ.
6) ಮಾನ್ಯ ಮಾನ್ಯ ಮೀನುಗಾರಿಕೆ, ಯುವಜನ ಸಬಲೀಕರಣ ಮತ್ತು ಕ್ರೀಡಾ ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿರವರು, ವಿಕಾಸಸೌಧ, ಬೆಂಗಳೂರು
7) ಶಾಖಾ ರಕ್ಷಾ ಕಡತ / ಸಮನ್ವಯ–ಕಂಪೆಂಡಿಯಂ / ಹೆಚ್ಚಿನ ಪ್ರತಿಗಳು.